ಅಸಲು ದಾವಾ ಸಂಖ್ಯೆ - 143/2016
ಡಿ.ಡಬ್ಲ್ಯೂ - 01
ದಿನಾಂಕ: 02-06-2026
ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.

<u>**ಮುಂದುವರಿದ ಮುಖ್ಯ ವಿಚಾರಣೆ: ಪ್ರತಿವಾದಿ ಪರ ವಕೀಲರಿಂದ:**</u>

ನಾನು ಈ ಕೆಳಕಂಡ ದಸ್ತಾವೇಜುಗಳನ್ನು ಹಾಜರು ಪಡಿಸಿದ್ದೇನೆ.

14 ನೇ ಪ್ರತಿವಾದಿಯ ಮೂಲ ಆಧಾರ ಕಾರ್ಡನ್ನು ಹಾಜರುಪಡಿಸಿದ್ದು ಅದನ್ನು ನಿಡಿ-2 ಎಂದು ಗುರುತಿಸಲಾಯಿತು.

14 ನೇ ಪ್ರತಿವಾದಿಯ ಕುಟುಂಬದ ಪಡಿತರ ಚೀಟಿಯನ್ನು ಹಾಜರುಪಡಿಸಿದ್ದು ಅದನ್ನು ನಿಡಿ-3 ಎಂದು ಗುರುತಿಸಲಾಯಿತು.

ಕಾರಡಗಿ ಗ್ರಾಮದ ಸರ್ವೆ ನಂ.133/2 ಎ, 133/5 ರ 4 ಉತಾರಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಡಿ-4 ರಿಂದ 7 ಎಂದು ಗುರುತಿಸಲಾಯಿತು.

ಎಂಆರ್ ನಂ.3623 ನ್ನು ಹಾಜರುಪಡಿಸಿದ್ದು ಅದನ್ನು ನಿಡಿ-8 ಎಂದು ಗುರುತಿಸಲಾಯಿತು.

ದಿನಾಂಕ 12-07-2016 ಮತ್ತು 04-06-2014 ರ ಸ್ವೀಕೃತಿ ಪ್ರತಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಡಿ-9 ಮತ್ತು 10 ಎಂದು ಗುರುತಿಸಲಾಯಿತು.

ಎಂಆರ್ ನಂ.3653/2003-04 ನ್ನು ಹಾಜರುಪಡಿಸಿದ್ದು ಅದನ್ನು ನಿಡಿ-11 ಎಂದು ಗುರುತಿಸಲಾಯಿತು.

ವೀಭದ್ರಪ್ಪ ಮತ್ತು ಪಾರವ್ವ, ಚನ್ನಬಸಪ್ಪ ಮತ್ತು ಗೌರವ್ವ ರವರ ಮದುವೆಯ ಆಮಂತ್ರಣ ಪತ್ರಿಕೆಯನ್ನು ಹಾಜರುಪಡಿಸಿದ್ದು, ವಾದಿ ಪರ ವಕೀಲರ ತಕರಾರಿಗೆ ಒಳಪಟ್ಟು ಅದನ್ನು ನಿಡಿ-12 ಎಂದು ಗುರುತಿಸಲಾಯಿತು.

ದಿನಾಂಕ 23-03-2026 ರ ಸ್ವೀಕೃತಿ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಡಿ-13 ಎಂದು ಗುರುತಿಸಲಾಯಿತು.

ಸಾಕ್ಷಿ 2 ಭಾವಚಿತ್ರಗಳನ್ನು ಮತ್ತು ಒಂದು ಸಿಡಿಯನ್ನು ಹಾಜರುಪಡಿಸಿದ್ದು ಸದರಿ ಭಾವಚಿತ್ರಕ್ಕೆ ಸಂಬಂಧಪಟ್ಟ ಪ್ರಮಾಣ ಪತ್ರ ಮತ್ತು ನೆಗೆಟಿವ್ಸನ್ನು ಹಾಜರುಪಡಿಸದೇ ಇರುವ ಕಾರಣ ಸದರಿ ಭಾವಚಿತ್ರಗಳನ್ನು ಗುರುತು ಮಾಡಿರುವುದಿಲ್ಲ.

ಆದ್ದರಿಂದ ದಾವೆಯನ್ನು ವಜಾ ಮಾಡಬೇಕೆಂದು ಕೇಳಿಕೊಳ್ಳುತ್ತೇನೆ.

**ಪಾಟೀ ಸವಾಲುಃ ಪಾಟೀ ಸವಾಲಿಗೆ ಕಾಲಾವಕಾಶ ಕೋರಿರುತ್ತಾರೆ ನೀಡಲಾಯಿತು.**

( ತೆರೆದ ನ್ಯಾಯಾಲಯದಲ್ಲಿ ನನ್ನ ಸಮಕ್ಷಮ ನನ್ನ ಉಕ್ತ ಲೇಖನದ ಮೇರೆಗೆ ಬೆರಳಚ್ಚು ಮಾಡಲಾಯಿತು.)

ಓ. ಹೆ. ಕೆ. ಸರಿ ಅದೆ.

ದಿವಾಣಿ ನ್ಯಾಯಾಧೀಶರು ಮತ್ತು
ಪ್ರ.ದ.ನ್ಯಾ.ದಂಡಾಧಿಕಾರಿಗಳು.ಸವಣೂರು